## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.**1045/2020**

ಸಾಕ್ಷಿದಾರರ ಹೇಳಿಕೆಃ

**ಹೆಸರು** : ದೇವರಾಜ್ ಚಾಸಾಃ **19** ಪ್ರಾಸಾಃ **8**

**ತಂದೆಯ ಹೆಸರು** : ಯಲ್ಲಪ್ಪ

**ವಯಸ್ಸು** : 44 ವರ್ಷ

**ವೃತ್ತಿ** : ಸಿ.ಪಿ. ಐ

**ವಾಸಸ್ಥಳ** : ಶಿವಮೊಗ್ಗ

ದಿನಾಂಕಃ 28-02-2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ನಾನು ದಿಃ 11-10-2019 ರಿಂದ ದಿಃ 30-09-2022 ರವರೆಗೆ ಹೊನ್ನಾಳಿ ವೃತ್ತದ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದೇನು.

ದಿಃ 02-03-2020 ರಂದು ಈ ಪ್ರಕರಣದ ಕಡತವನ್ನು ಚಾಸಾ-18 ರವರಿಂದ ಪಡೆದುಕೊಂಡು ಅಲ್ಲಿಯವರೆಗೂ ಆದ ತನಿಖೆಯನ್ನು ಪರಿಶೀಲಿಸಿ ತನಿಖೆಯನ್ನು ಮುಂದುವರೆಸಿ, ನಂತರ ಅದೇ ದಿನ ಅಪಘಾತವಾದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿ, ನಂತರ ಚಾಸಾ-16 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ.

ದಿಃ 12-03-2020 ರಂದು 2 ನೇ ಆರೋಪಿಗೆ ನೋಟೀಸನ್ನು ಜಾರಿ ಮಾಡಿ ಅವರಿಂದ ಪ್ರತ್ಯುತ್ತರವನ್ನು ಪಡೆದುಕೊಂಡಿದ್ದು ಸದರಿ ಪ್ರತ್ಯುತ್ತರದಲ್ಲಿ ಟ್ರ್ಯಾಕ್ಟರ್ ಇಂಜಿನ್ ಗೆ ವಿಮೆ ಇಲ್ಲದ ಕಾರಣ ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಚಾಸಾ-1 ರಿಂದ 3 ರವರ ಮರುಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ದಿಃ 14-03-2020 ರಂದು 4 ನೇ ಆರೋಪಿಗೆ ನೋಟೀಸನ್ನು ಜಾರಿ ಮಾಡಿ ಅವರಿಂದ ಪ್ರತ್ಯುತ್ತರವನ್ನು ಮತ್ತು ನಷ್ಟಭರ್ತಿ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡು ಮೋಟಾರ್ ಸೈಕಲ್ ಅನ್ನು ಅವರ ವಶಕ್ಕೆ ಬಿಟ್ಟುಕೊಟ್ಟಿರುತ್ತೇನೆ. ನಂತರ 1 ನೇ ಆರೋಪಿಯ ಸ್ವ ಇಚ್ಛೆಯಿಂದ ಠಾಣೆಗೆ ಹಾಜರಾಗಿದ್ದರಿಂದ ಆರೋಪಿಯ ವಿರುದ್ಧ ದಸ್ತಗಿರಿ ಕ್ರಮವನ್ನು ಅನುಸರಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ದಿಃ 20-03-2020 ರಂದು ಚಾಸಾ-13 ರವರಿಂದ ಐಎಂ ವಿ ವರದಿಯನ್ನು ಸ್ವೀಕರಿಸಿರುತ್ತೇನೆ. ಚಾಸಾ-15 ರವರಿಂದ ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ದಿಃ 06-05-2020 ರಂದು ಚಾಸಾ-14 ರವರಿಂದ ಮೃತನ ಪಿ ಎಂ ವರದಿಯನ್ನು ಸ್ವೀಕರಿಸಿರುತ್ತೇನೆ.

ದಿಃ 23-05-2020 ರಂದು 3 ನೇ ಆರೋಪಿಗೆ ನೋಟೀಸನ್ನು ಜಾರಿ ಮಾಡಿ ಅವರಿಂದ ಪ್ರತ್ಯುತ್ತರವನ್ನು ಪಡೆದುಕೊಂಡಿದ್ದು ಸದರಿ ಪ್ರತ್ಯುತ್ತರದಲ್ಲಿ ಟ್ರ್ಯಾಕ್ಟರ್ ಟ್ರೇಲರ್ ಗೆ ವಿಮೆ ಇಲ್ಲದ ಕಾರಣ ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದಿಃ 27-06-2020 ರಂದು ನ್ಯಾಯಾಲಯದ ಆದೇಶದಂತೆ ಟ್ರ್ಯಾಕ್ಟರ್ ಇಂಜಿನ್ ಅನ್ನು ಬಿಡುಗಡೆ ಮಾಡಲು ಚಾಸಾ-7 ಮತ್ತು 8 ರವರಿಗೆ ನೋಟೀಸನ್ನು ಜಾರಿ ಮಾಡಿ ನಂತರ ಚಾಸಾ-7 ಮತ್ತು 8 ರವರ ಸಮಕ್ಷಮ 2 ನೇ ಆರೋಪಿಗೆ ಬಿಟ್ಟುಕೊಟ್ಟು ಬಿಡುಗಡೆ ಮಹಜರ್ ಕ್ರಮವನ್ನು ಮದ್ಯಾಹ್ನ 12-00 ರಿಂದ 01-00 ಗಂಟೆ ಸಮಯದವರೆಗೆ ಜರುಗಿಸಿ ಛಾಯಾಚಿತ್ರಗಳನ್ನು ತೆಗೆದಿರುತ್ತೇನೆ. ನಂತರ ತನಿಖೆಯಿಂದ ಆರೋಪಿತರ ವಿರುದ್ಧ ಆರೋಪ ಸಾಭೀತಾಗಿದ್ದರಿಂದ, ದೋಷರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ನ್ಯಾಯಾಲಯದ ಮುಂದಿರುವ 1 ನೇ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

ಚಾಸಾ-1 ರವರು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು, ಚಾಸಾ-1 ರವರ ಹೇಳಿಕೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು , ಚಾಸಾ-2 ರವರು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು

ನಿಪಿ-3(ಬಿ) ಎಂದು, ಚಾಸಾ-2 ರವರ ಹೇಳಿಕೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು, ಚಾಸಾ-3 ರವರ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-24 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-24(ಬಿ) ಎಂದು, ಚಾಸಾ-3 ರವರ ಹೇಳಿಕೆಯನ್ನು ಈಗಾಗಲೇ ನಿಪಿ-25 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-25(ಎ) ಎಂದು, ಪಿ ಎಂ ವರದಿಯನ್ನು ನಿಪಿ-33 ಎಂದು,ಸಾಕ್ಷಿಯ ಸಹಿಯನ್ನು ನಿಪಿ-33(ಎ) ಎಂದು, 2 ನೇ ಆರೋಪಿಗೆ ನೀಡಿದ ನೋಟೀಸನ್ನು ನಿಪಿ-34 ಎಂದು,ಸಾಕ್ಷಿಯ ಸಹಿಯನ್ನು ನಿಪಿ-34(ಎ) ಎಂದು, 2 ನೇ ಆರೋಪಿ ನೀಡಿದ ಪ್ರತ್ಯುತ್ತರವನ್ನು ನಿಪಿ-35 ಎಂದು,ಸಾಕ್ಷಿಯ ಸಹಿಯನ್ನು ನಿಪಿ-35(ಎ) ಎಂದು, 4 ನೇ ಆರೋಪಿಗೆ ನೀಡಿದ ನೋಟೀಸನ್ನು ನಿಪಿ-36 ಎಂದು,ಸಾಕ್ಷಿಯ ಸಹಿಯನ್ನು ನಿಪಿ-36(ಎ) ಎಂದು, 4 ನೇ ಆರೋಪಿ ನೀಡಿದ ಪ್ರತ್ಯುತ್ತರವನ್ನು ನಿಪಿ-37 ಎಂದು,ಸಾಕ್ಷಿಯ ಸಹಿಯನ್ನು ನಿಪಿ-37(ಎ) ಎಂದು, 3 ನೇ ಆರೋಪಿಗೆ ನೀಡಿದ ನೋಟೀಸನ್ನು ನಿಪಿ-38 ಎಂದು,ಸಾಕ್ಷಿಯ ಸಹಿಯನ್ನು ನಿಪಿ-38(ಎ) ಎಂದು, 3 ನೇ ಆರೋಪಿ ನೀಡಿದ ಪ್ರತ್ಯುತ್ತರವನ್ನು ನಿಪಿ-39 ಎಂದು,ಸಾಕ್ಷಿಯ ಸಹಿಯನ್ನು ನಿಪಿ-39(ಎ) ಎಂದು, ವಾಹನ ಬಿಡುಗಡೆ ಮಹಜರ್ ಸಮಯದಲ್ಲಿ ಚಾಸಾ-7 ಮತ್ತು 8 ರವರಿಗೆ ನೀಡಿದ ನೋಟೀಸನ್ನು ನಿಪಿ-40 ಎಂದು, ಸಾಕ್ಷಿಯ ಸಹಿಯನ್ನು ನಿಪಿ-40(ಎ) ಎಂದು, ವಾಹನ ಬಿಡುಗಡೆ ಮಹಜರ್ ಅನ್ನು ನಿಪಿ-41 ಎಂದು, ಸಾಕ್ಷಿಯ ಸಹಿಯನ್ನು ನಿಪಿ-41(ಎ) ಎಂದು, ವಾಹನ ಬಿಡುಗಡೆ ಮಹಜರ್ ಸಮಯದಲ್ಲಿ ತೆಗೆದ 4 ಛಾಯಾಚಿತ್ರಗಳನ್ನು ನಿಪಿ-42 ರಿಂದ 45 ಎಂದು, 65 ಬಿ ಪ್ರಮಾಣ ಪತ್ರವನ್ನು ನಿಪಿ-46 ಎಂದು, ಸಾಕ್ಷಿಯ ಸಹಿಯನ್ನು ನಿಪಿ-46(ಎ) ಎಂದು, ಐ ಎಂ ವಿ ವರದಿಯನ್ನು ನಿಪಿ-47 ಎಂದು, ಸಾಕ್ಷಿಯ ಸಹಿಯನ್ನು ನಿಪಿ-47(ಎ) ಎಂದು, 4 ನೇ ಆರೋಪಿ ಬರೆದುಕೊಟ್ಟ ನಷ್ಟಭರ್ತಿ ಮುಚ್ಚಳಿಕೆ ಪತ್ರವನು ನಿಪಿ-48 ಎಂದು, ಸಾಕ್ಷಿಯ ಸಹಿಯನ್ನು ನಿಪಿ-48(ಎ) ಎಂದು, ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ನಿಪಿ-49 ಎಂದು, ಸಾಕ್ಷಿಯ ಸಹಿಯನ್ನು ನಿಪಿ-49(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು:- ಆರೋಪಿ ಪರ ವಕೀಲರರಿಂದ:-</u>

ಅಪಘಾತವಾದ ಸ್ಥಳಕ್ಕೆ ಭೇಟಿ ನೀಡಿಲ್ಲ ಪರಿಶೀಲನೆ ಮಾಡಿಲ್ಲ ಮತ್ತು ಚಾಸಾ-16 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. 2 ನೇ ಆರೋಪಿಗೆ ನೋಟೀಸನ್ನು ಜಾರಿ ಮಾಡಿಲ್ಲ  ಅವರಿಂದ ಪ್ರತ್ಯುತ್ತರವನ್ನು ಪಡೆದುಕೊಂಡಿಲ್ಲ ಮತ್ತು ಸದರಿ ಪ್ರತ್ಯುತ್ತರದಲ್ಲಿ ಟ್ರ್ಯಾಕ್ಟರ್ ಇಂಜಿನ್ ಗೆ ವಿಮೆ ಇಲ್ಲದ ಕಾರಣ ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ

ನಿವೇದಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರಿಂದ 3 ರವರ ಮರುಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. 4 ನೇ ಆರೋಪಿಗೆ ನೋಟೀಸನ್ನು ಜಾರಿ ಮಾಡಿಲ್ಲ ಅವರಿಂದ ಪ್ರತ್ಯುತ್ತರವನ್ನು ಮತ್ತು ನಷ್ಟಭರ್ತಿ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡಿಲ್ಲ ಮತ್ತು ಮೋಟಾರ್ ಸೈಕಲ್ ಅನ್ನು ಅವರ ವಶಕ್ಕೆ ಬಿಟ್ಟುಕೊಟ್ಟಿಲ್ಲ ಎಂದರೆ ಸರಿಯಲ್ಲ. 1 ನೇ ಆರೋಪಿಯ ಸ್ವ ಇಚ್ಚೆಯಿಂದ ಠಾಣೆಗೆ ಹಾಜರಾಗಿಲ್ಲ ಮತ್ತು ಆರೋಪಿಯ ವಿರುದ್ಧ ದಸ್ತಗಿರಿ ಕ್ರಮವನ್ನು ಅನುಸರಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿಲ್ಲ ಎಂದರೆ ಸರಿಯಲ್ಲ. ಚಾಸಾ-13 ರವರಿಂದ ಐ ಎಂ ವಿ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಚಾಸಾ-15 ರವರಿಂದ ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-14 ರವರಿಂದ ಮೃತನ ಪಿ ಎಂ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. 3 ನೇ ಆರೋಪಿಗೆ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ಅವರಿಂದ ಪ್ರತ್ಯುತ್ತರವನ್ನು ಪಡೆದುಕೊಂಡಿಲ್ಲ ಮತ್ತು ಸದರಿ ಪ್ರತ್ಯುತ್ತರದಲ್ಲಿ ಟ್ರ್ಯಾಕ್ಟರ್ ಟ್ರೇಲರ್ ಗೆ ವಿಮೆ ಇಲ್ಲದ ಕಾರಣ ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯದ ಆದೇಶದಂತೆ ಟ್ರ್ಯಾಕ್ಟರ್ ಇಂಜಿನ್ ಅನ್ನು ಬಿಡುಗಡೆ ಮಾಡಲು ಚಾಸಾ-7 ಮತ್ತು 8 ರವರಿಗೆ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ಚಾಸಾ-7 ಮತ್ತು 8 ರವರ ಸಮಕ್ಷಮ 2 ನೇ ಆರೋಪಿಗೆ ಬಿಟ್ಟುಕೊಟ್ಟು ಬಿಡುಗಡೆ ಮಹಜರ್ ಕ್ರಮವನ್ನು ಜರುಗಿಸಿಲ್ಲ ಛಾಯಾಚಿತ್ರಗಳನ್ನು ತೆಗೆದಿಲ್ಲ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ತನಿಖೆಯನ್ನು ನಡೆಸಿ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.